# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 383 |
| ಉತ್ತರಿಸಬೇಕಾದ ದಿನಾಂಕ | : | 07.07.2023 |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>1</td><td>ರಾಜ್ಯದಲ್ಲಿ ಕ್ರೀಡಾ ಚಟುವಟಿಕೆಗಳನ್ನು ಉತ್ತೇಜಿಸಲು ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳೇನು: (ವಿವರ ಒದಗಿಸುವುದು)</td><td>
ರಾಜ್ಯದಲ್ಲಿ ಕ್ರೀಡಾ ಚಟುವಟಿಕೆಗಳನ್ನು ಉತ್ತೇಜಿಸಲು ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳ ವಿವರ ಕೆಳಕಂಡಂತಿದೆ.<br>
1. ನಗದು ಪುರಸ್ಕಾರ: ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ವಿಜೇತರಾದ ಕ್ರೀಡಾಪಟುಗಳಿಗೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ. ವಿವರ ಇಂತಿದೆ.<br>
(ರೂ.ಲಕ್ಷಗಳಲ್ಲಿ)
<table>
<tr><th>ಕ್ರ. ಸಂ</th><th>ವಿವರ</th><th>ಚಿನ್ನ</th><th>ಬೆಳ್ಳಿ</th><th>ಕಂಚು</th></tr>
<tr><td>1</td><td>ಒಲಂಪಿಕ್ಸ್ ಗೇಮ್ಸ್</td><td>500.00</td><td>300.00</td><td>200.00</td></tr>
<tr><td>2</td><td>ಏಷಿಯನ್ ಗೇಮ್ಸ್</td><td>25.00</td><td>15.00</td><td>8.00</td></tr>
<tr><td>3</td><td>ಕಾಮನ್ ವೆಲ್ತ್ ಗೇಮ್ಸ್</td><td>25.00</td><td>15.00</td><td>8.00</td></tr>
<tr><td>4</td><td>ವರ್ಲ್ಡ್ ಕಪ್ /ಚಾಂಪಿಯನ್ ಷಿಪ್ (ಭಾರತ ಸರ್ಕಾರದಿಂದ ಅಂಗೀಕೃತವಾಗಿ ಭಾರತ ತಂಡದ ಭಾಗವಾಗಿ ಪ್ರತಿನಿಧಿಸಿರಬೇಕು)</td><td>5.00</td><td>3.00</td><td>2.00</td></tr>
<tr><td>5</td><td>ನ್ಯಾಷನಲ್ ಗೇಮ್ಸ್ (ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ಕ್ರೀಡೆಗಳು)</td><td>5.00</td><td>3.00</td><td>2.00</td></tr>
<tr><td>6</td><td>ನ್ಯಾಷನಲ್ ಚಾಂಪಿಯನ್ ಷಿಪ್ (ಒಲಂಪಿಕ್ ಕ್ರೀಡೆಗಳಿಗೆ ಮಾತ್ರ)</td><td>2.00</td><td>1.00</td><td>0.50</td></tr>
<tr><td>7</td><td>ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ ಮಾತ್ರ)</td><td>0.50</td><td>0.25</td><td>0.15</td></tr>
</table>
2. ಏಕಲವ್ಯ ಪ್ರಶಸ್ತಿ: ರಾಜ್ಯದ ಅತ್ಯುನ್ನತ ಪ್ರಶಸ್ತಿಯಾಗಿದ್ದು ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿ ನೀಡಲಾಗುವುದು.<br><br>
3. ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿ: ದೇಸೀ ಗ್ರಾಮೀಣ ಕ್ರೀಡೆಗಳಲ್ಲಿ ವಿಶೇಷ ಸಾಧನೆ ಮಾಡಿದ ರಾಜ್ಯದ ಗ್ರಾಮೀಣ ಕ್ರೀಡಾಪ್ರತಿಭೆಗಳಿಗೆ ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುವುದು.
</td></tr>
</table>

**4. ಶೈಕ್ಷಣಿಕ ಶುಲ್ಕ ಮರುಪಾವತಿ**: ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಗರಿಷ್ಠ ರೂ.50,000/- (Tuition Fees) ಶೈಕ್ಷಣಿಕ ಶುಲ್ಕ ಮರು ಪಾವತಿ ಮಾಡಲಾಗುತ್ತಿದೆ.

**5. ಕ್ರೀಡಾ ವಿದ್ಯಾರ್ಥಿ ವೇತನ**: ರಾಜ್ಯಮಟ್ಟದಲ್ಲಿ ಪದಕ ವಿಜೇತರಾಗಿ ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ರೂ.10,000/- ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.

**6. ಅಮೃತ ಕ್ರೀಡಾ ದತ್ತು ಯೋಜನೆ**: ಸದರಿ ಯೋಜನೆಯಡಿ ವಿವಿಧ ಕ್ರೀಡೆಗಳಲ್ಲಿ ಮುಂಬರುವ ಒಲಂಪಿಕ್ಸ್ ಪಂದ್ಯಾವಳಿಗಳಲ್ಲಿ ಹಾಗೂ ಅಂತರಾಷ್ಟ್ರೀಯ ಮಟ್ಟದ ಪಂದ್ಯಾವಳಿಗಳಲ್ಲಿ ಪದಕ ವಿಜೇತ ಸಾಮರ್ಥ್ಯವುಳ್ಳ 75 ಕ್ರೀಡಾಪಟುಗಳನ್ನು ಆಯ್ಕೆ ಮಾಡಲಾಗಿರುತ್ತದೆ ಹಾಗೂ ಪ್ರತಿ ಕ್ರೀಡಾಪಟುವಿಗೆ ತಲಾ ರೂ.10.00 ಲಕ್ಷದಂತೆ 75 ಕ್ರೀಡಾಪಟುಗಳಿಗೆ 750.00 ಲಕ್ಷಗಳನ್ನು ನೀಡಿ ಪ್ರೋತ್ಸಾಹಿಸಲಾಗುತ್ತಿದೆ.

**7. ಪರಿಶಿಷ್ಟ ಜಾತಿ ಮತ್ತು ಪರಶಿಷ್ಟ ಪಂಗಡದ ಕ್ರೀಡಾಪಟುಗಳಿಗೆ ವಿಶೇಷ ಉತ್ತೇಜನ**: ಪರಿಶಿಷ್ಟ ಜಾತಿ ಮತ್ತು ಪಂಗಡದ ಸಾಧಕ ಕ್ರೀಡಾಪಟುಗಳಿಗೆ ವಿಶೇಷ ನಗದು ಪುರಸ್ಕಾರ ವಿತರಿಸಲಾಗುತ್ತಿದೆ. ಅಂತರ-ರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯಮಟ್ಟದ ಕ್ರೀಡಾಕೂಟಗಳ ಪದಕ ವಿಜೇತರಿಗೆ ಕ್ರಮವಾಗಿ ತಲಾ ರೂ.5.00, 3.00 ಮತ್ತು 1.00 ಲಕ್ಷಗಳ ನಗದು ಪುರಸ್ಕಾರ ನೀಡಲಾಗುತ್ತಿದೆ.

**8. ಕ್ರೀಡಾ ವಸತಿ ಶಾಲೆ/ ನಿಲಯಗಳು:** ರಾಜ್ಯದಲ್ಲಿ ಒಟ್ಟು 34 ಕ್ರೀಡಾ ವಸತಿ ಶಾಲೆಗಳಿದ್ದು, ಪ್ರವೇಶ ಪಡೆಯುವ ಪ್ರತಿಭಾವಂತ ಯುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ತರಬೇತಿ ಮತ್ತು ಕ್ರೀಡಾ ಸಮವಸ್ತ್ರ ಒದಗಿಸಲಾಗುತ್ತಿದೆ. ದೈಹಿಕ ಕ್ಷಮತಾ ಪರೀಕ್ಷೆಗಳಲ್ಲಿ ಹಾಗೂ ಕ್ರೀಡಾ ಕೌಶಲ್ಯ ಪರೀಕ್ಷೆ ಆಧಾರಿತವಾಗಿ 5ನೇ ತರಗತಿ ಮೇಲ್ಪಟ್ಟ ಕ್ರೀಡಾಪಟುಗಳಿಗೆ ಆಯ್ಕೆ ಪ್ರಕ್ರಿಯೆ ನಡೆಸಿ, ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.

**9. ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಅನುದಾನ**: ಮಾನ್ಯತೆ ಪಡೆದ ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಕ್ರೀಡಾಕೂಟಗಳ ಆಯೋಜನೆಗೆ,ತರಬೇತಿ ಶಿಬಿರಗಳ ಆಯೋಜನೆ ಹಾಗೂ ಕ್ರೀಡಾಕೂಟಗಳಿಗೆ ರಾಜ್ಯ ತಂಡದ ನಿಯೋಜನೆಗೆ ಅನುದಾನ ನೀಡಲಾಗುತ್ತಿದೆ.

**10. ಕ್ರೀಡಾ ಮೂಲ ಸೌಕರ್ಯಗಳ ಸೃಜನೆ:** ಪ್ರಸ್ತುತ ಸದರಿ ಯೋಜನೆಯಡಿ ಜಿಲ್ಲಾ ಕ್ರೀಡಾಂಗಣಗಳು, ತಾಲ್ಲೂಕು ಕ್ರೀಡಾಂಗಣಗಳು, ಒಳಾಂಗಣ ಕ್ರೀಡಾಂಗಣಗಳು, ಈಜು ಕೊಳಗಳು ಹಾಗೂ ಇನ್ನಿತರೆ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

2022-23 ನೇ ಸಾಲಿನಲ್ಲಿ ರಾಜ್ಯವಲಯದಡಿ (ಬಂಡವಾಳ ವೆಚ್ಚ) ಒಟ್ಟು ಒದಗಿಸಲಾದ ರೂ.87.50 ಕೋಟಿಗಳಡಿ ಕ್ರೀಡಾ ಅನುದಾನದಲ್ಲಿ 104 ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ.

2 ಹಾಗಿದ್ದಲ್ಲಿ, ಸರ್ಕಾರವು ಕೈಗೊಂಡ ಕ್ರಮಗಳೇನು : (ವಿವರ ನೀಡುವುದು)

2022-23 ನೇ ಸಾಲಿನಲ್ಲಿ ಕ್ರೀಡಾಪಟುಗಳಿಗೆ ಪ್ರೋತ್ಸಾಹಿಸಿದ ಮೊತ್ತ ಹಾಗೂ ಕ್ರೀಡಾಪಟುಗಳ ಸಂಖ್ಯೆ

| ಕ್ರ ಸಂ | ಪ್ರಶಸ್ತಿಗಳ ವಿವರ | ಕ್ರೀಡಾಪಟು /ಸಂಸ್ಥೆಗಳ ಸಂಖ್ಯೆ | ವೆಚ್ಚವಾದ ಮೊತ್ತ ಕೋಟಿಗಳಲ್ಲಿ |
|---|---|---|---|
| 1 | ನಗದು ಪುರಸ್ಕಾರ | 317 | 15.35 |
| 2 | ವಿದ್ಯಾರ್ಥಿ ವೇತನ | 315 | 0.31 |
| 3 | ಶೈಕ್ಷಣಿಕ ಶುಲ್ಕ ಮರುಪಾವತಿ | 402 | 1.25 |
| 4 | ಸಹಸ್ರ ಕ್ರೀಡಾ ಪ್ರತಿಭಾ ಯೋಜನೆ | 733 | 7.33 |
| | **ಒಟ್ಟು** | **1767** | **24.24** |
| 5 | ಏಕಲವ್ಯ ಪ್ರಶಸ್ತಿ | 15 | 0.30 |
| 6 | ಜೀವಮಾನ ಸಾಧನೆ ಪ್ರಶಸ್ತಿ | 5 | 0.7 |
| 7 | ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ | 8 | 0.8 |
| 8 | ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ (ಕ್ರೀಡಾ ಸಂಸ್ಥೆಗಳಿಗೆ) | 3 | 0.15 |
| | **ಒಟ್ಟು** | **31** | **1.95** |

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ಒಟ್ಟು 34 ಕ್ರೀಡಾ ವಸತಿ ಶಾಲೆಗಳಲ್ಲಿ 2022-23ನೇ ಸಾಲಿನಲ್ಲಿ ಒಟ್ಟು 2359 ಕ್ರೀಡಾಪಟುಗಳು ತರಬೇತಿಯನ್ನು ಪಡೆದುಕೊಳುತ್ತಿದ್ದಾರೆ.

3 ಕ್ರೀಡಾ ಚಟುವಟಿಕೆಗಳನ್ನು ಉತ್ತೇಜಿಸಲು ವಾರ್ಷಿಕ ಬಜೆಟ್ ಹಂಚಿಕೆಯಾಗಿರುವ ಅನುದಾನದ ವಿವರ ಒದಗಿಸುವುದು.

2022-23ನೇ ಸಾಲಿಗೆ ಕ್ರೀಡಾ ಚಟುವಟಿಕೆಗಳನ್ನು ಉತ್ತೇಜಿಸಲು ಆಯವ್ಯಯ ಹಂಚಿಕೆ ಇಂತಿದೆ.

**(ರೂ.ಕೋಟಿಗಳಲ್ಲಿ)**

| | **ಆಯವ್ಯಯ ಹಂಚಿಕೆ** | **ಬಿಡುಗಡೆ** | **ವೆಚ್ಚ** |
|---|---|---|---|
| ರಾಜ್ಯ ವಲಯ | 349.62 | 349.37 | 348.84 |
| ಜಿಲ್ಲಾ ಪಂಚಾಯತ್ ವಲಯ | 38.17 | 38.17 | 34.87 |
| **ಒಟ್ಟು ಮೊತ್ತ** | **387.79** | **387.54** | **383.71** |

**ವೈಎಸ್‌ಡಿ/ಇಬಿಬಿ/49/2023**

(ಬಿ.ನಾಗೇಂದ್ರ)
ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.